ಶಾಲೆಗಳಿಗೆ ಪಠ್ಯಪುಸ್ತಕ ವಿತರಣೆ

306 (897) ಶ್ರೀ ವಸಂತ ಬಂಗೇರ. ಕೆ. (ಬೆಳ್ತಂಗಡಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದಲ್ಲಿ 2012–13ರ ಶೈಕ್ಷಣಿಕ ವರ್ಷದಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕಗಳನ್ನು ವಿತರಿಸಬೇಕಾಗಿದೆ; ಈವರೆಗೆ ಎಷ್ಟು ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕಗಳನ್ನು ವಿತರಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಶಾಲೆ ಆರಂಭವಾಗಿ ತಿಂಗಳು ಕಳೆದರೂ, ಇನ್ನು ಸಾವಿರಾರು ಶಾಲೆಗಳಿಗೆ ಪಠ್ಯ ಪುಸ್ತಕ ವಿತರಣೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ.;

(ಇ) ಪಠ್ಯ ಪುಸ್ತಕಗಳನ್ನು ಸರ್ಕಾರವೇ ಮುದ್ರಿಸಿ ವಿತರಿಸುತ್ತಿರುವುದರಿಂದ ಸರ್ಕಾರಕ್ಕೆ ಆಗುವ ಲಾಭವೇನು ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) 2012–13ನೇ ಸಾಲಿನಲ್ಲಿ 101.34 ಲಕ್ಷ ವಿದ್ಯಾರ್ಥಿಗಳಿಗೆ 528.72 ಲಕ್ಷ ಪಠ್ಯ ಪುಸ್ತಕಗಳನ್ನು ವಿತರಣೆ ಮಾಡಬೇಕಾಗಿದೆ. ಈವರೆಗೆ ಎಲ್ಲಾ ಪಠ್ಯ ಪುಸ್ತಗಳನ್ನು ವಿತರಣೆ ಮಾಡಲಾಗಿದೆ.

ಆ) ಎಲ್ಲಾ ಶಾಲೆಗಳಿಗೂ ಪಠ್ಯಪುಸ್ತಕಗಳು ವಿತರಣೆಯಾಗಿರುತ್ತದೆ.

(ಇ) ಲಾಭದ ಉದ್ದೇಶ ಸರ್ಕಾರಕ್ಕೆ ಇರುವುದಿಲ್ಲ. ಇದು ಸರ್ಕಾರದ ಪ್ರೋತ್ಸಾಹದಾಯಕ ಕಾರ್ಯಕ್ರಮದಡಿಯಲ್ಲಿ ಕೈಗೊಂಡಿರುವ ಕಾರ್ಯಕ್ರಮವಾಗಿರುತ್ತದೆ.

ಶಿಕ್ಷಕರ ನೇಮಕಾತಿ

226 (890) ಶ್ರೀ ಗೋಪಾಲ ಭಂಡಾರಿ ಹೆಚ್.(ಕಾರ್ಕಳ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಸರ್ಕಾರಿ ಅನುದಾನಿತ ಶಾಲೆಗಳಲ್ಲಿ ವಿದ್ಯಾರ್ಥಿ ಶಿಕ್ಷಕರ ಅನುಪಾತವೇನು;

(ಆ) ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿ ಶಿಕ್ಷಕರ ಅನುಪಾತವೇನು.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿ ಶಿಕ್ಷಕರ ಅನುಪಾತ 1:30 ಇರುತ್ತದೆ. ಪ್ರಸ್ತುತ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಅನುಪಾತ 1:40 ಇರುತ್ತದೆ. ಆದರೆ, ಮಕ್ಕಳ ಶಿಕ್ಷಣ ಹಕ್ಕು ನಿಯಮದಂತೆ ವಿದ್ಯಾರ್ಥಿ ಶಿಕ್ಷಕರ ಅನುಪಾತ 1:30 ಇರಬೇಕು ಎಂದಿದೆ. ಅದರಂತೆ,

ಅನುದಾನಿತ ಶಾಲೆಗಳಲ್ಲೂ ಸಹ ವಿದ್ಯಾರ್ಥಿ ಶಿಕ್ಷಕರ ಅನುಪಾತ 1: 30 ಇರುವ ಬಗ್ಗೆ ಕೈಗೊಳ್ಳಬೇಕಾದ ಕ್ರಮವು ಸರ್ಕಾರದ ಪರಿಶೀಲನೆಯಲ್ಲಿದೆ.

ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳು

275 (173) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದಲ್ಲಿ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳೆಂದು ಘೋಷಿಸಿರುವ ಖಾಸಗಿ ಸಂಸ್ಥೆಗಳೆಷ್ಟು ?

(ಆ) ರಾಜ್ಯದಲ್ಲಿರುವ ಅಲ್ಪಸಂಖ್ಯಾತ ಆಡಳಿತ ಮಂಡಳಿಯ ಶಿಕ್ಷಣ ಸಂಸ್ಥೆಗಳೆಂದು ಪರಿಗಣಿಸಲು ಸರ್ಕಾರ ವಿಧಿಸಿರುವ ಮಾನದಂಡವೇನು?

(ಇ) ಅಲ್ಪಸಂಖ್ಯಾತ ಆಡಳಿತ ಮಂಡಳಿ ನಡೆಯುವ ಸಂಸ್ಥೆಗಳೆಂದು ಪರಿಗಣಿಸಲು ಬಂದಿರುವ ಅರ್ಜಿಗಳೆಷ್ಟು ?

(ಈ) ಈ ಅರ್ಜಿಗಳ ಪೈಕಿ, ಎಷ್ಟು ಅರ್ಜಿಗಳಿಗೆ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯೆಂದು ಪರಿಗಣಿಸಲಾಗಿದೆ.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ)	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ	1059
	ಪದವಿ ಪೂರ್ವ ಶಿಕ್ಷಣ	94

ಆ) ಆರ್‌ಟಿಇ ಅಡಿಯಲ್ಲಿ ಶೈಕ್ಷಣಿಕ ವರ್ಷದಲ್ಲಿ ಅಲ್ಪಸಂಖ್ಯಾತ ಸಂಸ್ಥೆಯಲ್ಲಿ ಶೇ. 75 ಕ್ಕಿಂತ ಕಡಿಮೆ ಇಲ್ಲದಂತೆ ಅಲ್ಪಸಂಖ್ಯಾತ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳು ದಾಖಿಲಾಗಿರುವುದನ್ನು ಖಚಿತ ಪಡಿಸಿಕೊಂಡ ನಂತರ ಅಂತಹ ಶಿಕ್ಷಣ ಸಂಸ್ಥೆಗಳನ್ನು ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳೆಂದು ಘೋಷಿಸಲು ಪರಿಷ್ಕೃತ ಆದೇಶ ಹೊರಡಿಸಲಾಗುತ್ತಿದೆ.

ಇ)	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ	28
	ಪದವಿ ಪೂರ್ವ ಶಿಕ್ಷಣ	35
ಈ)	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ	28
	ಪದವಿ ಪೂರ್ವ ಶಿಕ್ಷಣ	22